ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

**ಸಂಖ್ಯೆ: ಕವಿಪ್ರನಿನಿ/ಬಿ16/5607(2)/2000-01**

ದಿನಾಂಕ : - 1 APR 2022

## ಸುತ್ತೋಲೆ

**ವಿಷಯ:** ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ರ ಕ್ರಮ ಸಂಖ್ಯೆ: 12(ಬಿ)(1) ರ ಶೇಕಡಾ 10 ರ ಕೋಟಾದಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ.

**ಉಲ್ಲೇಖ:**
1. ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/ಬಿ16/5607(2)/2000-01 ದಿನಾಂಕ: 07.05.2020.
2. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/5607(2)/2000-01 ದಿನಾಂಕ: 12.06.2020.
3. ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5607(5)/2000-01 ದಿನಾಂಕ: 30.08.2021.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋಂ.ಸಂ.659), ಬೆಂಗಳೂರು ರವರ ಪತ್ರ ಸಂಖ್ಯೆ: ಕವಿಪ್ರನಿನೌಸಂ/994/21-22 ದಿನಾಂಕ: 15.03.2022.

***

ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5607(2)/2000-01 ದಿನಾಂಕ: 07.05.2020 ಹಾಗೂ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5607(5)/2000-01 ದಿನಾಂಕ: 30.08.2021 ರಲ್ಲಿ ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಾವಳಿಗಳ ಅಧ್ಯಾಯ-6 ರ ಕ್ರಮ ಸಂಖ್ಯೆ: 12 (ಬಿ) (1) ರಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಯ ಪದೋನ್ನತಿಗೆ ನಿಗಧಿಪಡಿಸಿರುವ ಕನಿಷ್ಟ ಅರ್ಹತೆ ಹಾಗೂ ನೇಮಕಾತಿ ವಿಧಾನಕ್ಕೆ ಸೂಕ್ತ ತಿದ್ದುಪಡಿಯನ್ನು ಮಾಡಲಾಗಿರುತ್ತದೆ. ಮುಂದುವರೆದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ನೇಮಕಾತಿ ಪ್ರಾಧಿಕಾರಿಗಳಿಗೆ ಉಂಟಾಗಬಹುದಾದ ಕೆಲವು ಸಂದೇಹ/ಗೊಂದಲಗಳನ್ನು ನಿವಾರಿಸಲು ಹಾಗೂ ಎಲ್ಲಾ ವೃತ್ತಗಳಲ್ಲಿ ಬಡ್ತಿ ನೀಡುವಾಗ ಏಕರೂಪತೆ ಅನುಸರಿಸುವ ದೃಷ್ಟಿಯಿಂದ ನಿಗಮದ ದಿನಾಂಕ: 12.06.2020 ರ ಸುತ್ತೋಲೆಯಲ್ಲಿ ಕೆಲವು ಮಾರ್ಗಸೂಚಿಗಳನ್ನು ಪಾಲಿಸುವಂತೆ ಸೂಚಿಸಲಾಗಿರುತ್ತದೆ. ಸದರಿ ಮಾರ್ಗಸೂಚಿಗಳನ್ನು ಎಲ್ಲಾ ಪದೋನ್ನತಿ ಪ್ರಾಧಿಕಾರಿಗಳು ಕಡ್ಡಾಯವಾಗಿ ಅನುಸರಿಸುವಂತೆ ತಿಳಿಸಲಾಗಿದೆ.

ಮುಂದುವರೆದು, ನಿಗಮದ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ರ ಕ್ರಮ ಸಂಖ್ಯೆ: 12(ಬಿ)(1) ಶೇಕಡ 10 ರ ಕೋಟಾದಡಿಯಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಗೆ ಬಡ್ತಿ ನೀಡುವ ಸಮಯದಲ್ಲಿ ನೌಕರರ ಜ್ಯೇಷ್ಠತೆ ಮತ್ತು ಮುಂದಿನ ಹುದ್ದೆಗೆ ಪದೋನ್ನತಿ ಅವಕಾಶಗಳನ್ನು ಕಾಪಾಡುವ ದೃಷ್ಟಿಯಿಂದ ಎಲ್ಲಾ ವೃತ್ತಗಳಲ್ಲಿ ಬಡ್ತಿ ನೀಡುವಾಗ ಏಕರೂಪತೆಯನ್ನು ಅನುಸರಿಸಲು, **ಎಕ್ಸಿಕ್ಯೂಟಿವ್ ಲೋಯರ್ ಇಲಾಖಾ ಪರೀಕ್ಷೆಯ ಮರು ಮೌಲ್ಯಮಾಪನದ ಫಲಿತಾಂಶ ಪ್ರಕಟವಾದ ನಂತರ ಮಾತ್ರ** ಬಡತಿ ಆದೇಶಗಳನ್ನು ಹೊರಡಿಸಲು ಕ್ರಮ ಕೈಗೊಳ್ಳುವುದು.

ನಿಗಮದ, ದಿನಾಂಕ: 14.12.2021 ರ ಎಕ್ಸಿಕ್ಯೂಟಿವ್ ಲೋಯರ್ ಇಲಾಖಾ ಪರೀಕ್ಷೆಯ ಫಲಿತಾಂಶದ ಆಧಾರದ ಮೇಲೆ, ಯಾವುದಾದರೂ ವೃತ್ತದಲ್ಲಿ ಒಂದು ವೇಳೆ ಬಡತಿ ಆದೇಶಗಳನ್ನು ಈಗಾಗಲೇ ಹೊರಡಿಸಿದ್ದಲ್ಲಿ, ಸದರಿ ಬಡತಿ ಆದೇಶಗಳನ್ನು ಕೂಡಲೇ ತಡೆಹಿಡಿಯುವುದು ಮತ್ತು ಮರು ಮೌಲ್ಯಮಾಪನದ ಫಲಿತಾಂಶವು ಪ್ರಕಟಗೊಂಡ ನಂತರ ಪರಿಷ್ಕೃತ ಬಡತಿ ಆದೇಶ ಹೊರಡಿಸಲು ಕ್ರಮ ಕೈಗೊಳ್ಳತಕ್ಕದ್ದು.

ಈ ಸೂಚನೆಯನ್ನು ಎಲ್ಲಾ ನೇಮಕಾತಿ/ಪದೋನ್ನತಿ ಪ್ರಾಧಿಕಾರಿಗಳು ಕಡ್ಡಾಯವಾಗಿ ಪಾಲಿಸತಕ್ಕದ್ದು. ತಪ್ಪಿದ್ದಲ್ಲಿ, ಸಂಬಂಧಪಟ್ಟ ಪ್ರಾಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   https://kptcl.karnataka.gov.in for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.